## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ. ಜ್ಞಾನಮೂರ್ತಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗಾಣದಾಳು ಗ್ರಾಮಪಂಚಾಯಿತಿ, ಚಿಕ್ಕನಾಯಕನಹಳ್ಳಿ ತಾಲ್ಲೂಕು, ತುಮಕೂರು ಜಿಲ್ಲೆ, (ಹಾಲಿ ನಿವೃತ್ತ) ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅಸಪ ಸಂಖ್ಯೆ: D.O.No. Compt//BD/6613/2014/ARLO-2, ದಿನಾಂಕ: 02.03.2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು 10.02.2017 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಈ ಕೆಳಗಿನಂತೆ ತಿಳಿಸಿರುತ್ತಾರೆ.

1. ಶ್ರೀ. ಕೆ. ಹನುಮಂತಯ್ಯ, ಯಗಚಿಹಳ್ಳಿ ಗ್ರಾಮದ ನಿವಾಸಿ, ಚಿಕ್ಕನಾಯಕನಹಳ್ಳಿ ತಾಲ್ಲೂಕು, ತುಮಕೂರು ಜಿಲ್ಲೆ. ತಮ್ಮ ದೂರಿನಲ್ಲಿ (1) ಶ್ರೀ. ಕೃಷ್ಣಾನಾಯಕ್, ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ, ಚಿಕ್ಕನಾಯಕನಹಳ್ಳಿ (2) ಶ್ರೀ. ಜ್ಞಾನಮೂರ್ತಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ (3) ಶ್ರೀ. ಶ್ರೀನಿವಾಸ, ಅಧ್ಯಕ್ಷರು, (4) ಶ್ರೀಮತಿ ತಾಜುನ್ನೀಸಾ, ಸದಸ್ಯರು, ಗಾಣದಾಳು ಗ್ರಾಮಪಂಚಾಯಿತಿ, ಚಿಕ್ಕನಾಯಕನಹಳ್ಳಿ ತಾಲ್ಲೂಕು, ತುಮಕೂರು ಜಿಲ್ಲೆ, ರವರ ವಿರುದ್ಧ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9 ರ ಅಡಿಯಲ್ಲಿ ತನಿಖೆಗೆ ತೆಗೆದುಕೊಳ್ಳಲಾಗಿದೆ.

2. ದೂರಿನ ಸಂಕ್ಷಿಪ್ತ ವಿವರಣೆ :–

ದೂರುದಾರರು ತಮ್ಮ ದೂರಿನಲ್ಲಿ ಚಿಕ್ಕನಾಯಕನಹಳ್ಳಿ ತಾಲ್ಲೂಕು ಗಾಣದಾಳು ಗ್ರಾಮ ಪಂಚಾಯಿತಿಯಿಂದ ದೂರುದಾರರ ಹೆಂಡತಿ ಶಾರದಮ್ಮ ಅವರಿಗೆ 2012 ನೇ ಸಾಲಿನಲ್ಲಿ ಇಂದಿರಾ ಆವಾಸ್ ಯೋಜನೆಯಡಿಯಲ್ಲಿ ಮನೆಗೆ ಆರ್ಥಿಕ ಸೌಲಭ್ಯ ಮಂಜೂರಾಗಿತ್ತು. ದೂರುದಾರರು ಮನೆ ಕಟ್ಟಲು ಪ್ರಾರಂಭಿಸಿ ಒಂದು ಹಂತದ ಬಿಲ್ಲನ್ನು ಪಡೆದಿರುತ್ತಾರೆ. ಮನೆ ಪೂರ್ಣಗೊಂಡ ನಂತರ ಇನ್ನುಳಿದ 3 ಬಿಲ್ಲಿನ ಹಣವನ್ನು ಎದುರುದಾರರು ಪಾವತಿಸಿರುವುದಿಲ್ಲ ಈ ಬಿಲ್ಲಿನ ಮೊತ್ತ ಕೇಳಿದರೆ ಎದುರುದಾರರು 8000/- ರೂ ಗಳ ಲಂಚದ ಬೇಡಿಕೆ ಇಟ್ಟಿರುತ್ತಾರೆ. ಈ ಕಾರಣದಿಂದ ಎದುರುದಾರರು ಮನೆಯ ಹಿಂಬದಿಯ ಬಾಗಿಲಿನ ಭಾವಚಿತ್ರವನ್ನು ತೆಗೆದು ಜಿ.ಪಿ.ಆರ್.ಎಸ್. ನಲ್ಲಿ ಅಳವಡಿಸಿ, ಹಣ ಪಾವತಿಯಾಗದಂತೆ ಮಾಡಿರುತ್ತಾರೆ. ಆದ್ದರಿಂದ ಎದುರುದಾರರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ದೂರು ಸಲ್ಲಿಸಿದ್ದಾರೆ.

3. 1ನೇ ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ 2 ರಿಂದ 4 ನೇ ಎದುರುದಾರರು ದೂರುದಾರರಿಂದ 8000/- ರೂ.ಗಳ ಲಂಚದ ಬೇಡಿಕೆ ಇಟ್ಟಿರುವ ಬಗ್ಗೆ ತನ್ನ ಗಮನಕ್ಕೆ ಬಂದಿರುವುದಿಲ್ಲ. ಆಡಿಟ್ ಪ್ಯಾರಾದಲ್ಲಿ ಆಕ್ಷೇಪಣೆ ಇರುವುದರಿಂದ ಗ್ರಾಮ ಪಂಚಾಯತಿಗೆ ಅನುದಾನ ಬಿಡುಗಡೆ ಆಗಿರುವುದಿಲ್ಲವೆಂದು ಕಾರ್ಯದರ್ಶಿಗಳು ತಿಳಿಸಿರುತ್ತಾರೆ. ತಾನು ಈಗಾಗಲೇ ಆ ಪಂಚಾಯತಿಯಿಂದ ವರ್ಗಾವಣೆಗೊಂಡಿರುವುದರಿಂದ ಸದರಿ ಪ್ರಕರಣವನ್ನು ಮುಕ್ತಾಯಗೊಳಿಸಬೇಕೆಂದು ಕೇಳಿಕೊಂಡಿದ್ದಾರೆ.

4. 2ನೆ ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ದೂರುದಾರರಿಗೆ ದಿ. 8.10.2012 ರಂದು ಮೊದಲ ಹಂತದ ಹಣ ಜಮಾವಣೆ ಮಾಡಿದ್ದು 2, 3 ಹಾಗೂ 4ನೇ ಹಂತದ ಹಣವನ್ನು ಬಿಡುಗಡೆ ಮಾಡಲು ಜಿ.ಪಿ.ಎಸ್.ನ್ನು ಕ್ರಮವಾಗಿ 17.4.2013, 26.5.2013 ರಂದು ಅಪ್‌ಲೋಡ್ ಮಾಡಿದ್ದು, ಆದರೆ ವಸತಿ ನಿಗಮದವರು ಹೌಸ್ ಎಕ್ಸ್‌ಟೆನ್ಷನ್ ಎಂದು ತಕರಾರು ತೆಗೆದು ಬಿಲ್ ತಡೆಹಿಡಿದಿರುತ್ತಾರೆ. ತಾನು ದಿ. 1.8.2013 ರಂದು ಈ ಪಂಚಾಯತಿಯ ಕರ್ತವ್ಯಕ್ಕೆ ಹಾಜರಾಗಿದ್ದು, ಜಿ.ಪಿ.ಎಸ್. ಮಾಡಿರುವುದು ತನ್ನ ಅವಧಿಯಲ್ಲಿ ಇರುವುದಿಲ್ಲ. ಆದ್ದರಿಂದ ಸದರಿ ಪ್ರಕರಣವನ್ನು ಮುಕ್ತಾಯಗೊಳಿಸಬೇಕೆಂದು ಕೋರಿದ್ದಾರೆ.

5. 3 ಮತ್ತು 4ನೇ ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ದೂರುದಾರರಿಗೆ ಮೊದಲನೇ ಹಂತದ ಹಣ ಬಿಡುಗಡೆಯಾಗಿದ್ದು, ಇನ್ನುಳಿದ ಬಾಕಿ ಹಣ ಬಿಡುಗಡೆ ಮಾಡಲು ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ ರಾಜೀವ್ ಗಾಂಧಿ ವಸತಿ ನಿಗಮಕ್ಕೆ ವರದಿಯನ್ನು ಕಳುಹಿಸಲಾಗಿರುತ್ತದೆ. ಆದ್ದರಿಂದ ಸದರಿ ಪ್ರಕರಣವನ್ನು ಮುಕ್ತಾಯಗೊಳಿಸಬೇಕೆಂದು ಕೋರಿದ್ದಾರೆ.

6. ದೂರುದಾರರು ತಮ್ಮ ಪ್ರತ್ಯುತ್ತರದಲ್ಲಿ ದೂರಿನಲ್ಲಿನ ಅಂಶಗಳನ್ನು ಪುನರುಚ್ಚರಿಸಿದ್ದಾರೆ.

7. ದೂರುದಾರರು ಹಾಜರುಪಡಿಸಿದ ದೂರು ಮತ್ತು ದಾಖಲಾತಿಗಳು, ಆಕ್ಷೇಪಣೆ ಮತ್ತು ದಾಖಲಾತಿಗಳು, ಮತ್ತು ಪ್ರತ್ಯುತ್ತರ ಮತ್ತು ದಾಖಲಾತಿಗಳನ್ನು ಪರಿಶೀಲಿಸಿದಾಗ, ದೂರುದಾರರ ಹೆಂಡತಿಯು ಬಸವ ಇಂದಿರಾ ಆವಾಸ್ ಯೋಜನೆಯ ಫಲಾನುಭವಿಯಾಗಿದ್ದು ಅವರಿಗೆ ಒಂದು ಹಂತದ ಹಣ ಈಗಾಗಲೇ ಬಿಡುಗಡೆಯಾಗಿದೆಯೆಂದು ಉಭಯಪಕ್ಷಕಾರರೂ ಒಪ್ಪಿಕೊಂಡಿರುತ್ತಾರೆ. ಆದರೆ ಇನ್ನುಳಿದ 3 ಹಂತದ ಹಣ ಬಿಡುಗಡೆ ಮಾಡಲು ವಸತಿ ನಿಗಮವು ಆಕ್ಷೇಪಣೆಯೊಂದಿಗೆ ಬಿಲ್ಲನ್ನು ತಡೆಹಿಡಿದಿರುತ್ತದೆಂದು 2ನೇ ಎದುರುದಾರರು ತಿಳಿಸಿರುತ್ತಾರೆ. ವಸತಿ ನಿಗಮವು ಆಕ್ಷೇಪಣೆಯೊಂದಿಗೆ ಬಿಲ್ಲನ್ನು ತಡೆಹಿಡಿದಿರುತ್ತದೆಂದು 2ನೇ ಎದುರುದಾರರು ತಿಳಿಸಿರುತ್ತಾರೆ. ವಸತಿ ನಿಗಮದವರು 2013 ರಲ್ಲಿಯೇ ಹಣ ಬಿಡುಗಡೆಗೆ ಆಕ್ಷೇಪಣೆ ಎತ್ತಿದ ನಂತರ 2ನೇ ಎದುರುದಾರರು ಅದನ್ನು ಸರಿಪಡಿಸಿ ಪುನಃ ಹಣ ಬಿಡುಗಡೆಗೆ ಪ್ರಯತ್ನಿಸಬಹುದಾಗಿತ್ತು. ಒಂದು ಸಾರಿ ಆಕ್ಷೇಪಣೆ ಎತ್ತಿದ ಮಾತ್ರಕ್ಕೆ ಮುಂದಿನ ಕ್ರಮಕೈಗೊಳ್ಳದಿದ್ದರೆ ದೂರುದಾರರಿಗೆ ಹಣ ಬಿಡುಗಡೆಯಾಗುವುದಿಲ್ಲ. ಆದರೆ 2ನೇ ಎದುರುದಾರರು ಈ ಹಣ ಬಿಡುಗಡೆಗೆ ಮುಖ್ಯಜವಾಬ್ದಾರರಾಗಿದ್ದು, ಅದನ್ನು ಪ್ರಾಮಾಣಿಕವಾಗಿ ಮಾಡಿರುವುದಿಲ್ಲವೆಂದು ಕಂಡುಬರುತ್ತದೆ.

8. 1ನೇ ಎದುರುದಾರರು ದಿ.14.8.2013 ರಲ್ಲಿಯೇ ವರ್ಗಾವಣೆಗೊಂಡಿರುವುದರಿಂದ ಅವರನ್ನು ಇದಕ್ಕೆ ಹೊಣೆಗಾರರನ್ನಾಗಿ ಮಾಡಲು ಆಗುವುದಿಲ್ಲ. ಅಲ್ಲದೆ 3 ಮತ್ತು 4ನೇ ಎದುರುದಾರರು ಚುನಾಯಿತ ಪ್ರತಿನಿಧಿಗಳಿದ್ದು ವಸತಿಯೋಜನೆಯ ಮನೆಗಳಿಗೆ ಹಣ ಬಿಡುಗಡೆ ಮಾಡುವಲ್ಲಿ ಅವರ ಪಾತ್ರ ಇರುವುದಿಲ್ಲ. ಆದ್ದರಿಂದ 1, 3 ಮತ್ತು 4ನೇ ಎದುರುದಾರರನ್ನು ಈ ಪ್ರಕರಣದಿಂದ ಕೈಬಿಡುವುದು ಸೂಕ್ತವೆನಿಸುತ್ತದೆ.

9. 2ನೇ ಎದುರುದಾರರು ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾಗಿದ್ದು, ಅವರು ದಿ. 1.8.2013 ರಂದು ಕರ್ತವ್ಯಕ್ಕೆ ಹಾಜರಾದ ನಂತರ ದೂರುದಾರರ ಖಾತೆಗೆ ಹಣ ಜಮಾ ಮಾಡಲು ಪ್ರಯತ್ನಿಸಿ ಅಥವಾ ಹಣಜಮಾ ಆಗಿದ್ದರೆ ಆ ವರದಿಯನ್ನು ಈ ಕಛೇರಿಗೆ ಸಲ್ಲಿಸಬಹುದಾಗಿತ್ತು. ಅದರೆ ಅವರು ಯಾವುದೇ ಪ್ರಯತ್ನ ಮಾಡದೆ ಇರುವುದರಿಂದ ದೂರುದಾರರು ತೊಂದರೆಗೆ ಸಿಲುಕಿದ್ದಾರೆಂದು ಕಂಡುಬರುತ್ತದೆ. ಆದ್ದರಿಂದ 2ನೇ ಎದುರುದಾರರು ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಜವಾಬ್ದಾರಿಯುತವಾಗಿ ನಡೆದುಕೊಳ್ಳದೆ ಕರ್ತವ್ಯಲೋಪವೆಸಗಿದ್ದಾರೆಂದು ಮೇಲ್ನೋಟಕ್ಕೆ ಕಂಡುಬರುತ್ತದೆ.

10. ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು ಹಾಗೂ ದಾಖಲಾತಿಗಳನ್ನು ಮತ್ತು ಎದುರುದಾರರು ನೀಡಿರುವ ಉತ್ತರಗಳನ್ನು ಕೂಲಂಕಷವಾಗಿ ಪರಿಶೀಲಿಸಿದಾಗ, 2ನೇ ಎದುರುದಾರರು ತಮ್ಮ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ/ಸಮಂಜಸ/ಸಮಾಧಾನಕರ ಕಾರಣ ತೋರಿಸಿಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿದೆ.

ಈ ಹಿನ್ನೆಲೆಯಲ್ಲಿ ಶ್ರೀ. ಜ್ಞಾನಮೂರ್ತಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗಾಣದಾಳು ಗ್ರಾಮಪಂಚಾಯಿತಿ, ಚಿಕ್ಕನಾಯಕನಹಳ್ಳಿ ತಾಲ್ಲೂಕು, ತುಮಕೂರು ಜಿಲ್ಲೆ, (ಹಾಲಿ ನಿವೃತ್ತ) ಇವರು ಸರ್ಕಾರಿ ನೌಕರರಾಗಿದ್ದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966 ರ ನಿಯಮ 3(1)ರ ಅಡಿಯಲ್ಲಿ ದರ್ನಡತೆ/ದುರ್ವರ್ತನೆ ಕಂಡು ಬರುವುದರಿಂದ ಮತ್ತು ಸದರಿಯವರು ದಿನಾಂಕ:31.03.2014 ರಂದು ನಿವೃತ್ತಿ ಹೊಂದಿರುವುದರಿಂದ ಕೆಸಿಎಸ್ಆರ್ ನಿಯಮ 214(2)(ಬಿ)(i)ರ ಅಡಿ ಇಲಾಖಾ ವಿಚಾರಣೆಗೆ ಅನುಮತಿಯನ್ನು ನೀಡಿ ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿ 1957 ನಿಯಮ 14 (ಎ) ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/211/ಗ್ರಾಪಂಕಾ/2017 ಬೆಂಗಳೂರು, ದಿನಾಂಕ:11–04–2017.</u>**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ. ಜ್ಞಾನಮೂರ್ತಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗಾಣದಾಳು ಗ್ರಾಮ ಪಂಚಾಯಿತಿ, ಚಿಕ್ಕನಾಯಕನಹಳ್ಳಿ ತಾಲ್ಲೂಕು, ತುಮಕೂರು ಜಿಲ್ಲೆ, (ಹಾಲಿ ನಿವೃತ್ತ) ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ,

ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಾವಳಿಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ. ಹಾಗೂ ಸದರಿಯವರು ನಿವೃತ್ತಿ ಹೊಂದಿರುವುದರಿಂದ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ ನಿಯಮ 214(2)(ಬಿ) (i) ರಡಿಯಲ್ಲಿ ಸರ್ಕಾರವು ಮಂಜೂರಾತಿ ನೀಡಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ನಿಯಮಾನುಸಾರ ಸೂಕ್ತ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಪುಟ 1 ರಿಂದ54 ರವರೆಗೆ ಮೂಲ ದಾಖಲೆಗಳನ್ನು ಇದರೊಂದಿಗೆ ಲಗತ್ತಿಸಿ ಹಿಂದಿರುಗಿಸಿದೆ).
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಜಿಲ್ಲೆ,
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಚಿಕ್ಕನಾಯಕನಹಳ್ಳಿ ತಾಲ್ಲೂಕು, ತುಮಕೂರು ಜಿಲ್ಲೆ,
6. ಶ್ರೀ. ಜ್ಞಾನಮೂರ್ತಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗಾಣದಾಳು ಗ್ರಾಮಪಂಚಾಯಿತಿ, ಚಿಕ್ಕನಾಯಕನಹಳ್ಳಿ ತಾಲ್ಲೂಕು, ತುಮಕೂರು ಜಿಲ್ಲೆ, (ಹಾಲಿ ನಿವೃತ್ತ)
7. ಗಣಕ ಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.